ನ್ಯಾಯಾಲಯಗಳಿಗೆ ತಲಾ ಒಂದು ಅಧ್ಯಕ್ಷಾಧಿಕಾರಿ ಹುದ್ದೆಯನ್ನು ಹಾಗೂ ತಲಾ 17 ಪೂರಕ ಸಿಬ್ಬಂದಿಯ ಹುದ್ದೆಗಳನ್ನು ಸರ್ಕಾರದ ಆದೇಶ ಸಂಖ್ಯೆ ಲಾ 27 ಎಲ್‌ಸಿಇ 2010, ದಿನಾಂಕ: 11-03-2011 ರಲ್ಲಿ ಮಂಜೂರು ಮಾಡಲಾಗಿದೆ.

ಈ ದಿಶೆಯಲ್ಲಿ ಕೇಂದ್ರ ಸರ್ಕಾರವು ಅನಾವರ್ತಕ ವೆಚ್ಚದ ಶೇಕಡಾ 70 ರಷ್ಟು ಅಂದರೆ ರೂ. 25.20 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಿರುತ್ತದೆ. ಅದಕ್ಕನುಗುಣವಾಗಿ, ರಾಜ್ಯ ಸರ್ಕಾರದ ಪಾಲಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿ, ಆ ಇಲಾಖೆಯು "ಇತರೇ ರಾಜ್ಯಗಳಲ್ಲಿ ಗ್ರಾಮ ನ್ಯಾಯಾಲಯಗಳನ್ನು ಸ್ಥಾಪಿಸಲು ಅನುಮತಿ ನೀಡಿದ್ದಲ್ಲಿ ಅಂತಹ ನ್ಯಾಯಾಲಯಗಳು ಎಷ್ಟು ಹುದ್ದೆಗಳೊಂದಿಗೆ ಕಾರ್ಯನಿರ್ವಹಿಸುತ್ತಿವೆ ಹಾಗೂ ಒಟ್ಟು ವೆಚ್ಚದಲ್ಲಿ ವಾರ್ಷಿಕವಾಗಿ ಆ ರಾಜ್ಯದ ಶೇಕಡಾವಾರು ಆವರ್ತಕ ಹಾಗೂ ಅನಾವರ್ತಕ ವೆಚ್ಚವನ್ನು ಎಷ್ಟು ಭರಿಸುತ್ತಿದೆ." ಎಂಬ ಮಾಹಿತಿಯನ್ನು ಕೋರಿದ್ದು, ಸದರಿ ಮಾಹಿತಿಯನ್ನು ಮಾನ್ಯ ಉಚ್ಚ ನ್ಯಾಯಾಲಯದಿಂದ ಪಡೆಯಲು ಕ್ರಮವಹಿಸಲಾಗಿದೆ. ಆರ್ಥಿಕ ಇಲಾಖೆಯು ಕೋರಿರುವ ಮಾಹಿತಿಯನ್ನು ಆದಷ್ಟು ಜಾಗ್ರತೆ ನೀಡಲು ಹಾಗೂ ಈ ಕಾರ್ಯಕ್ರಮವನ್ನು ಶೀಘ್ರವಾಗಿ ಜಾರಿಗೆ ತರಲು ಪ್ರಯತ್ನಿಸಲಾಗುವುದು.

ಹಳೆಯ ವಿದ್ಯುತ್ ತಂತಿಗಳನ್ನು ಬದಲಾಯಿಸುವುದು

587 (454) ಶ್ರೀ ರಾಜೀವ್ ಪಿ. (ಕುಡಚಿ) :- ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

(ಅ) ಬೆಳಗಾವಿ ಜಿಲ್ಲೆ, ಕುಡಚಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ವಿದ್ಯುತ್ ತಂತಿಗಳು ಹಳೆಯದಾಗಿ, ತುಂಡಾಗಿ ಬೀಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ 3 ವರ್ಷಗಳಲ್ಲಿ ವಿದ್ಯುತ್ ತಂತಿ ತುಂಡಾಗಿ ಬಿದ್ದು, ವಿದ್ಯುತ್ ತಗುಲಿ ಅಕಾಲಿಕ ಮರಣಕ್ಕೆ ತುತ್ತಾದವರ ಸಂಖ್ಯೆ ಎಷ್ಟು ;

(ಇ) ವಿದ್ಯುತ್ ತಂತಿಗಳನ್ನು ಬದಲಾಯಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) :-

(ಅ) ಹೌದು.

(ಆ) ಕಳೆದ ಮೂರು ವರ್ಷಗಳಲ್ಲಿ, ಕುಡಚಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ವಿದ್ಯುತ್ ತಂತಿ ತುಂಡಾಗಿ ಬಿದ್ದು ಒಂದು ವಿದ್ಯುತ್ ಅಪಘಾತ ಸಂಭವಿಸಿದ್ದು, ಸದರಿ ಅಪಘಾತದಲ್ಲಿ ಶ್ರೀ ಹಣಮಂತ ವೆಂಕಪ್ಪ ಕಮಲ ಸಾ॥ ಕಂಕಣವಾಡಿ ಎಂಬ ವ್ಯಕ್ತಿಯು ದಿನಾಂಕ: 08–09–2012 ರಂದು ಮರಣ ಹೊಂದಿರುತ್ತಾರೆ.

(ಇ) ಬೆಳಗಾವಿ ಜಿಲ್ಲೆ, ಕುಡಚಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 22 ಮಾರ್ಗಗಳ 101.66 ಕಿ.ಮೀ. ಉದ್ದದ ಹಳೆಯದಾದ ತಂತಿಗಳನ್ನು ಬದಲಾಯಿಸಲು ಸುಮಾರು ರೂ. 111.55 ಲಕ್ಷ ಮೊತ್ತದ ಅಂದಾಜು ಪಟ್ಟಿಯು ಮಂಜೂರಾಗಿದ್ದು, ಟೆಂಡರ್ ಪ್ರಕ್ರಿಯೆಯು ಪ್ರಗತಿಯಲ್ಲಿದೆ.

ಮೌಲ್ಯ ಮಾಪನದಲ್ಲಿ ಅವ್ಯವಹಾರ

507 (1035) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) :– ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನಾ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯವು ಕಳೆದ ಸಾಲಿನಲ್ಲಿ ನಡೆಸಿದ ಪರೀಕ್ಷೆಗಳ ಮೌಲ್ಯ ಮಾಪನದಲ್ಲಿ ತೀವ್ರವಾದ ಅನ್ಯಾಯ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ತಪ್ಪಿತಸ್ಥರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಕಾನೂನು ಪದವಿ ಪರೀಕ್ಷೆಗಳನ್ನು ಕನ್ನಡ ಮಾಧ್ಯಮದಲ್ಲಿ ಬರೆಯುತ್ತಿರುವ ವಿದ್ಯಾರ್ಥಿಗಳಿಗೆ ಕಡಿಮೆ ಅಂಕಗಳನ್ನು ನೀಡುತ್ತಿರುವುದರಿಂದ ಕನ್ನಡ ಭಾಷಾ ವಿದ್ಯಾರ್ಥಿಗಳ ಭವಿಷ್ಯಕ್ಕೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಸರ್ಕಾರ ನೀಡುವ ಪರಿಹಾರವೇನು ; (ವಿವರ ನೀಡುವುದು)

(ಉ) ಇದಕ್ಕೆ ಕಾರಣವಾದ ತಪ್ಪಿತಸ್ಥ ಅಧಿಕಾರಿಗಳ ಹಾಗೂ ಉಪನ್ಯಾಸಕರ ವಿರುದ್ಧ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಿರುವುದು ?